"2010ರ ಕರ್ನಾಟಕ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕ ಮಂಡಿಸಲಾಗಿದೆ. – ಅನುಬಂಧ II

3) ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕ, 2010 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2010ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕ ಮಂಡಿಸಲಾಗಿದೆ. ಅನುಬಂಧ – III